Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in principal@klsvdit.edu.in**

Date: 05-09-2022

**ಪತ್ರಿಕಾ ಪ್ರಕಟಣೆ:**

## ಶಿಕ್ಷಕರ ದಿನಾಚರಣೆ ವಿಜೃಂಭಣೆಯಿಂದ ಆಚರಣೆ

ಕೆ.ಎಲ್.ಎಸ್. ವಿ.ಡಿ.ಐ.ಟಿ. ಹಳಿಯಾಳದಲ್ಲಿ ದೇಶ ಕಂಡ ಸರ್ವಶ್ರೇಷ್ಠ ಶಿಕ್ಷಕ ದಿ. ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ 134ನೇಯ ಜನ್ಮದಿನದ ಪ್ರಯುಕ್ತ ಸಪ್ಟೆಂಬರ್ 5ರಂದು ಶಿಕ್ಷಕರ ದಿನಾಚರಣೆಯನ್ನು ವಿಜ್ರಂಭಣೆಯಿಂದ ಆಚರಿಸಲಾಯಿತು. ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಧಾರವಾಡದ ಶಿಕ್ಷಣ ತಜ್ಞರು ಹಾಗೂ ಬರಹಗಾರರೂ ಆದ ಶ್ರೀ.ಶ್ರೀನಿವಾಸ ವಡಪ್ಪಿ ಅವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ " ದೇಶ ಕಟ್ಟುವ ಕಾರ್ಯದಲ್ಲಿ ಶಿಕ್ಷಕರ ಪಾತ್ರ ಬಹು ಮುಖ್ಯವಾಗಿದ್ದು, ಸದೃಢ ಭಾರತ ನಿರ್ಮಾಣದ ಜವಾಬ್ದಾರಿಯೂ ಎಲ್ಲಾ ಶಿಕ್ಷಕರ ಮೇಲಿದೆ ನುಡಿದರು. ವಿದ್ಯಾರ್ಥಿಗಳಲ್ಲಿರುವ ನ್ಯೂನ್ಯತೆಗಳನ್ನು ಅರಿತು, ಸುಶಿಕ್ಷಿತರನ್ನಾಗಿಸಿ ಉಜ್ವಲ ಭವಿಷ್ಯ ಹೊಂದುವಂತೆ ಮಾಡಿ, ದೇಶವು ಪ್ರಗತಿಯ ಪಥ ದಲ್ಲಿರುವಂತೆ ಮಾಡಿರುವುದು ಶಿಕ್ಷಕರು ಎಂದು ಹೇಳಿದರು. ವಿದ್ಯಾರ್ಥಿಗಳ ಮನಸ್ಥಿತಿಯನ್ನರಿತು, ಉತ್ತಮ ಮಾರ್ಗದರ್ಶನವನ್ನು ನೀಡುವುದು ಮಾದರಿ ಶಿಕ್ಷಕನ ಗುಣಲಕ್ಷಣ ವೆಂದು ನುಡಿದರು". ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯರಾದ ಡಾ.ವಿ.ಎ.ಕುಲಕರ್ಣಿಯವರು ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ಶಿಕ್ಷಕರೆಲ್ಲರಿಗೂ ಪ್ರೇರಣೆ, ನಿಸ್ವಾರ್ಥ ಮನೋಭಾವದಿಂದ ವಿದ್ಯಾರ್ಥಿಗಳ ಏಳಿಗೆಗೆ ಶ್ರಮಿಸುವುದೇ ಉತ್ತಮ ಶಿಕ್ಷಕನ ಗುಣಲಕ್ಷಣವೆಂದು ಹೇಳಿದರು. ಮಹಾವಿದ್ಯಾಲಯದ ಎಲ್ಲಾ ಬೋಧಕ ಸಿಬ್ಬಂದಿಗಳು ವಿದ್ಯಾರ್ಥಿಗಳಲ್ಲಿ ಮಾನವೀಯ ಮೌಲ್ಯಗಳನ್ನು ತುಂಬಿ ಉತ್ತಮ ಇಂಜಿನಿಯರ್‌ಗಳನ್ನಾಗಿ ಮಾಡಬೇಕೆಂದು ಕರೆನೀಡಿದರು.

ರಸಾಯನ ಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ರವೀಂದ್ರ ಮುನ್ನೊಳ್ಳಿ ಸ್ವಾಗತಿಸಿದರು. ಡೀನ್ ಎಫ್. ಐ. ಐ. ಐ. ಪ್ರೊ. ಸುಧೀರ್ ಕುಲಕರ್ಣಿ ನಿರೂಪಿಸಿ ವಂದಿಸಿದರು. ಮಹಾವಿದ್ಯಾಲಯದ ಎಲ್ಲಾ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ಪಾಲ್ಗೊಂಡಿದ್ದರು. ಶಿಕ್ಷಕರ ದಿನಾಚರಣೆ ಅಂಗವಾಗಿ ದಿ. ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪುಷ್ಪ ಸಮರ್ಪಣೆ ಮಾಡಲಾಯಿತು.

ಪ್ರಾಂಶುಪಾಲರು

**Principal**
**KLS Vishwanathrao Deshpande Institute of Technology, Haliyal**


KLS
VDIT/2015-16/54/065
VDIT/2015-16/54/113
16/54/008


VDIT|2015-16|54|023